ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1850 (1617)
ಸದಸ್ಯರ ಹೆಸರು : ಶ್ರೀ ಬಿ.ಜಿ. ಪಾಟೀಲ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು
ಉತ್ತರಿಸುವ ದಿನಾಂಕ : 15.03.2022

ಸಂಖ್ಯೆ	ಪ್ರಶ್ನೆ	ಉತ್ತರ
ಅ	ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯು ಹೈದ್ರಾಬಾದ್-ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿ ಬರುವುದರಿಂದ ಈ ಭಾಗದ ಅಭಿವೃದ್ಧಿಗಾಗಿ ವಾಣಿಜ್ಯ ಮತ್ತು ಕೈಗಾರಿಕೆಗಳನ್ನು ಉತ್ತೇಜಿಸಲು ಸರ್ಕಾರವು ವಿಶೇಷ ಯೋಜನೆಯನ್ನು ಜಾರಿಗೆ ತರಲು ಯೋಚಿಸಿದೆಯೇ; (ವಿವರ ನೀಡುವುದು)	ಖಾಸಗಿ ಉದ್ದಿಮೆದಾರರು ಕೈಗಾರಿಕೆಗಳನ್ನು ಸ್ಥಾಪಿಸುವ ಸಂಬಂಧ ಉತ್ತೇಜನ ನೀಡಲು ಸರ್ಕಾರವು ನೂತನ ಕೈಗಾರಿಕಾ ನೀತಿ 2020-25 ನ್ನು ಜಾರಿಗೆ ತಂದಿರುತ್ತದೆ. ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳನ್ನು ಈ ನೀತಿಯಲ್ಲಿ ಅತ್ಯಂತ ಹಿಂದುಳಿದ ತಾಲ್ಲೂಕುಗಳೆಂದು ವಲಯ-1 ರಲ್ಲಿ ವರ್ಗೀಕರಿಸಲಾಗಿದ್ದು, ಹೆಚ್ಚಿನ ಪ್ರಮಾಣದ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ.
ಆ	ಯೋಚಿಸಿದ್ದಲ್ಲಿ, ಈ ಯೋಜನೆಗಳು ಯಾವುವು? (ವಿವರ ನೀಡುವುದು)	ಸರ್ಕಾರದ ನೂತನ ಕೈಗಾರಿಕಾ ನೀತಿ 2020-25 ರನ್ವಯ ಈ ಕೆಳಕಂಡ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ. 1. ಬಂಡವಾಳ ಹೂಡಿಕೆ ಸಹಾಯಧನ/ ವಹಿವಾಟು ಆಧಾರಿತ ಹೂಡಿಕೆ ಸಹಾಯಧನ 2. ಮುದ್ರಾಂಕ ಶುಲ್ಕ ರಿಯಾಯಿತಿ ಹಾಗೂ ನೋಂದಣಿ ಶುಲ್ಕ ವಿನಾಯಿತಿ 3. ಭೂ ಪರಿವರ್ತನಾ ಶುಲ್ಕ ಮರುಪಾವತಿ 4. ವಿದ್ಯುತ್ ಶುಲ್ಕದ ಮೇಲಿನ ತೆರಿಗೆ ವಿನಾಯಿತಿ 5. ವಿದ್ಯುಚ್ಛಕ್ತಿ ಸಹಾಯಧನ 6. ಇ.ಟಿ.ಪಿ. ಸಹಾಯಧನ 7. ಐ.ಎಸ್.ಓ/ ಐ.ಎಸ್.ಐ ಪ್ರಮಾಣ ಪತ್ರದ ವೆಚ್ಚದ ಮರುಪಾವತಿ 8. ರಫ್ತು ಘಟಕಗಳಿಗೆ ಪ್ರೋತ್ಸಾಹ 9. ಮಳೆ ನೀರು ಕೊಯ್ಲು/ ಸಂರಕ್ಷಣೆ ಪ್ರೋತ್ಸಾಹ 10. ಗುಣಮಟ್ಟ ಪ್ರಮಾಣೀಕರಣಕ್ಕೆ ಉತ್ತೇಜನ 11. ಆ್ಯಂಕರ್ ಘಟಕ ಸಹಾಯಧನ

		ಮುಂದುವರೆದಂತೆ, ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ 2013–14 ರಿಂದ ಪ್ರಸ್ತುತದವರೆಗೆ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ ಈ ಕೆಳಕಂಡಂತೆ ಯೋಜನೆಗಳಿಗೆ ಅನುಮೋದನೆ ನೀಡಲಾಗಿರುತ್ತದೆ.

ಕ್ರ ಸಂ.	ಜಿಲ್ಲೆ	ಘಟಕಗಳು	ಹೂಡಿಕೆ	ಉದ್ಯೋಗಾವಕಾಶ
1	ಕಲಬುರಗಿ	08	1189.02	1447
2	ಯಾದಗಿರಿ	87	3872.17	18321

ಸಿಐ 67 ಎಸ್‌ಪಿಐ 2022

(ಡಾ॥ ಮುರುಗೇಶ ಆರ್. ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು